# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/09/2020-21 ದಿನಾಂಕ: 05/02/2021

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 05/02/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
4. ಶ್ರೀ ಪ್ರಭಾಕರ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಪ್ರಕಾಶ್ ಕೆ, ಸದಸ್ಯರು
7. ಶ್ರೀ ಶ್ರೀನಿವಾಸ್, ಸದಸ್ಯರು
8. ಶ್ರೀಮತಿ. ಬೇಬಿ ರಾಣಿ

**ಗೈರು ಹಾಜರಾಗಿರುವ ಅಧಿಕಾರಿಗಳು**

1. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು
2. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಯಲಹಂಕ ವಲಯ, ಬಿ.ಬಿ.ಎಂ.ಪಿ
3. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್)
4. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ)

ಪು.ತಿ.ನೋ..

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-**

ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಬ್ಲೂಮೂನ್ ಗಾರ್ಡನ್ ಸಾರ್ವಜನಿಕರು:-**

- ಸದರಿ ಪ್ರದೇಶದಲ್ಲಿ ಪ್ರತಿನಿತ್ಯ ಘನತ್ಯಾಜ್ಯ ಸಂಗ್ರಹಣೆ ಹಾಗೂ ರಸ್ತೆ ಬದಿಯಲ್ಲಿ ಕಸಗುಡಿಸುವಿಕೆಯನ್ನು ಕೈಗೊಳ್ಳಲು ಕೋರಿರುತ್ತಾರೆ.
- ಸದರಿ ಪ್ರದೇಶದಲ್ಲಿ ಬೆಸ್ಕಾಂ ವತಿಯಿಂದ ಅಳವಡಿಸಿರುವ ಕೇಬಲ್‌ಗಳನ್ನು ರಿನೋವೇಷನ್ ಮಾಡಲು ಕೋರಿರುತ್ತಾರೆ.
- ಸದರಿ ಪ್ರದೇಶದಲ್ಲಿ ಎಲೆಕ್ಟ್ರಿಕಲ್ ಪೋಲ್ ಅವಶ್ಯಕತೆಯಿದ್ದು, ಎಲೆಕ್ಟ್ರಿಕಲ್ ಪೋಲ್ ಅಳವಡಿಸಲು ಕೋರಿರುತ್ತಾರೆ.
- ಸದರಿ ಪ್ರದೇಶದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದರಿಂದ ಬೀದಿ ನಾಯಿಗಳ ನಿರ್ವಹಣೆಗೆ ಕ್ರಮವಹಿಸಲು ಕೋರಿರುತ್ತಾರೆ.
- ಸದರಿ ಪ್ರದೇಶದಲ್ಲಿ ಖಾಲಿ ಸೈಟ್‌ಗಳನ್ನು ಸ್ವಚ್ಛಗೊಳಿಸುವ ಬಗ್ಗೆ ಕ್ರಮವಹಿಸಲು ಕೋರಿರುತ್ತಾರೆ.

**ಗ್ಯಾಸ್ ಗೋಡನ್ ಪ್ರದೇಶದಲ್ಲಿ ನೆಲೆಸಿರುವ ಸಾರ್ವಜನಿಕರು:-**

ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ಗ್ಯಾಸ್ ಗೋಡನ್ ಪ್ರದೇಶದಲ್ಲಿ ನೆಲೆಸಿರುವ ಸಾರ್ವಜನಿಕರು ಗ್ಯಾಸ್ ಗೋಡನ್ ರಸ್ತೆಯಲ್ಲಿ ಒಳಚರಂಡಿ ವ್ಯವಸ್ಥೆ ಹಾಗೂ ಮಳೆ ನೀರು ಸರಾಗವಾಗಿ ಹರಿಯಲು ಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಮತ್ತು ಸದರಿ ರಸ್ತೆಗೆ ಡಾಂಬರು ಹಾಕಲು ಕೋರಿರುತ್ತಾರೆ.

**ಸಭೆಯಲ್ಲಿ ಹಾಜರಾಗಿದ್ದ ಸದಸ್ಯರು ಹಾಗೂ ಸಾರ್ವಜನಿಕರು:-**

ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ರಾಮಚಂದ್ರಪುರ ಹಳೆಯ ಊರಿನಲ್ಲಿ, ರಾಘವೇಂದ್ರ ಮಠ ಹತ್ತಿರ ಮತ್ತು ರಾಜಕಾಲುವೆಯ ಆಸುಪಾಸುಗಳಲ್ಲಿ ವಯಸ್ಕರು ಮತ್ತು ಕಾಲೇಜು ವಿದ್ಯಾರ್ಥಿಗಳು ಗಾಂಜಾ ಸೇವಿಸುತ್ತಿದ್ದು, ಸದರಿಯವರ ಮೇಲೆ ಕಾನೂನಿನ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ತಿಳಿಸಲು ಹಾಗೂ ದೊಡ್ಡಬೊಮ್ಮಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಸಂಬಂಧಿಸಿದಂತೆ ಪ್ರತಿನಿತ್ಯ ಹಸಿ ಕಸ ಹಾಗೂ ಒಣ ಕಸ ಸಂಗ್ರಹಣೆಯ ಬಗ್ಗೆ ಮೈಕ್ ಮೂಲಕ ಅನೌನ್ಸ್‌ಮೆಂಟ್ ಮಾಡಲು ಸಭೆಗೆ ನೆರೆದಿದ್ದ ಸಾರ್ವಜನಿಕರು ಹಾಗೂ ಸದಸ್ಯರು ಕೋರಿರುತ್ತಾರೆ.

ಮು.ತಿ.ನೋ..

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Sunitha. N.L
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

5/2/2021.
ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ/ಯೋಜನಾ ವಿಭಾಗ, ಬಿ.ಬಿ.ಎಂ.ಪಿ ರವರಿಗೆ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರಿಗೆ ಸಲ್ಲಿಸುತ್ತಾ ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ, ಬೆಂಗಳೂರು.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು ರವರಿಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
10. ಕಾಂಟ್ಯಾಕ್ಟ್ ಟ್ರೇಸಿಂಗ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
11. ಹೋಮ್ ಕ್ವಾರಂಟೇನ್ ಸ್ಕ್ವಾಡ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
12. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
14. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
15. ಕಛೇರಿ ಕಡತಕ್ಕೆ.